ಸ್ವಾತಂತ್ರ್ಯದ ಅಮೃತಮಹೋತ್ಸವ

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ದೂರವಾಣಿ ಸಂಖ್ಯೆ : 080-22212343

ಅಂತರ್ಜಾಲ : https://kptcl.karnataka.gov.in

ಇ-ಮೇಲ್ ವಿಳಾಸ : director.ahr.kptcl@gmail.com

**ಸಂಖ್ಯೆ: ಕವಿಪ್ರನಿನಿ/ಬಿ16/5607/2000-01(2)(ಎ)** 23 DEC 2022

ಅಧೀಕ್ಷಕ ಇಂಜಿನಿಯರ್(ವಿ),

ಕಾರ್ಯ ಮತ್ತು ಪಾಲನಾ ವೃತ್ತ,

ಬೆಸ್ಕಾಂ,

**ದಾವಣಗೆರೆ.**

ಮಾನ್ಯರೆ,

**ವಿಷಯ:** ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ಕ್ರಮ ಸಂಖ್ಯೆ: 12(ಬಿ)(1) ರ ಕೋಟಾದಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ ಸ್ಪಷ್ಟೀಕರಣ.

**ಉಲ್ಲೇಖ:** ತಮ್ಮ ಕಚೇರಿಯ ಪತ್ರ ಸಂಖ್ಯೆ: ದಾ/ಅ ಇಂ(ವಿ)/ಉಲೆನಿ/ಲೆಅ/ಸಲೆಅ/ಸಿ5/2022-23/10338-39 ದಿನಾಂಕ: 03.12.2022.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಹಿಂದಿನ ವೃತ್ತದಲ್ಲಿ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ದಿನಾಂಕ: 06.07.2022 ರಂದು ಶೇಕಡ 10 ರ ಕ್ರಮ ಸಂಖ್ಯೆ: 12(ಬಿ)(1) ರ ಅಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಈಗಾಗಲೇ ಬಡ್ತಿಯನ್ನು ನೀಡಲಾಗಿದ್ದು, ದಿನಾಂಕ: 14.10.2022 ರ ಸುತ್ತೋಲೆಯನ್ವಯ ಈಗಾಗಲೇ ನೀಡಿರುವ ಪದೋನ್ನತಿಯ ಕುರಿತಂತೆ ಯಾವ ರೀತಿಯ ಕ್ರಮ ಕೈಗೊಳ್ಳಬೇಕೆಂಬುದರ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ಉಲ್ಲೇಖದ ತಮ್ಮ ಪತ್ರದಲ್ಲಿ ಕೋರಲಾಗಿರುತ್ತದೆ.

ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ಕ್ರಮ ಸಂಖ್ಯೆ: 12(ಬಿ)(1) ಕೋಟಾದಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಬಡ್ತಿ ನೀಡುವ ವಿಷಯದಲ್ಲಿ ಹಲವಾರು ನೌಕರರು ಕರ್ನಾಟಕ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ಸಲ್ಲಿಸಿದ್ದು, ಪ್ರಕರಣಗಳು ಮಾನ್ಯ ನ್ಯಾಯಾಲಯದಲ್ಲಿ ಇತ್ಯರ್ಥವಾಗದೇ ಬಾಕಿ ಇರುತ್ತವೆ. ಈ ಹಿನ್ನಲೆಯಲ್ಲಿ ಪ್ರಕರಣದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳಲು ಸೂಚಿಸಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು

**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಪ್ರತಿಯನ್ನು:**

1. ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ), ಬೆಸ್ಕಾಂ, ಬೆಂಗಳೂರು/ ಮೆಸ್ಕಾಂ,ಮಂಗಳೂರು/ ಸೆಸ್ಕ್,ಮೈಸೂರು/ ಹೆಸ್ಕಾಂ,ಹುಬ್ಬಳ್ಳಿ/ ಜೆಸ್ಕಾಂ,ಕಲಬುರಗಿ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಎಲ್ಲಾ ಎಸ್ಕಾಂಗಳು.